**ಆರ್.ಡಬ್ಲ್ಯೂಃ 1**

**ಸಾಕ್ಷಿಯನ್ನು ಕರೆಸಿ ಪ್ರಮಾಣಿಕರಿಸಲಾಯಿತು.**

**ದಿನಾಂಕಃ** 18-07-2025

ಈ ದಿನ ನಾನು ನ್ಯಾಯಾಲಯಕ್ಕೆ ನನ್ನ ಲಿಖಿತ ಸತ್ಯ ಪ್ರತಿಜ್ಞೆ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಿರುತ್ತವೆ ಮತ್ತು ಅವುಗಳ ಅಂಶವನ್ನು ಓದಿ ನಾನೇ ಸಹಿ ಮಾಡಿರುತ್ತೇನೆ.

**ಮುಂದುವರಿದ ಮುಖ್ಯ ವಿಚಾರಣೆಃ 2ನೇ ಎದ್ರುದಾರರ ಪರ ಶ್ರೀ ಎಸ್.ಎಂ.ಬಿ. ವಕೀಲರಿಂದ,**

ಈ ಪ್ರಕರಣದಲ್ಲಿ ನಾನು 2ನೇ ಎದುರುದಾರರ ಸಂಸ್ಥೆಯ ಪರವಾಗಿ ಸಾಕ್ಷಿ ನುಡಿಯುತ್ತಿದ್ದೇನೆ. ಪ್ರಕರಣಕ್ಕೆ ಸಂಬಂಧಿಸಿದಂತೆ ನಮ್ಮ ಸಂಸ್ಥೆಯವರು ಸಾಕ್ಷಿ ನುಡಿಯಲು ನೀಡಿದ ಅಧಿಕಾರ ಪತ್ರ ಹಾಜರುಪಡಿಸಿದ್ದು, ಅದನ್ನು ನಿ.ಆರ್-2 ಎಂದು, ಒಂದು ವಿಮಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಆರ್-3 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿದಾರರ ಅರ್ಜಿಯನ್ನು 2ನೇ ಎದ್ರುದಾರರ ವಿರುದ್ಧ ವಜಾ ಮಾಡಬೇಕಾಗಿ ವಿನಂತಿ.

**ಪಾಟೀಸವಾಲುಃ- ಅರ್ಜಿದಾರರ ಪರ ಶ್ರೀ ಜಿ.ಎಂ.ಎಂ. ವಕೀಲರಿಂದ,**

(ಈ ಹಂತದಲ್ಲಿ ಅರ್ಜಿದಾರರು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು ಅವರ ಪರವಾಗಿ ಶ್ರೀ ಎ ಆರ್ ಎನ್ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಪ್ರಕರಣ ಮುಂದೂಡಲಾಯಿತು.)

**(ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ.**

**ಸಹಿ ಇದೆ**

**ಮೆಂಬರ್ ಎಡಿಶನಲ್ ಎಂಎಸಿಟಿ ಮತ್ತು**

**ಹಿರಿಯ ಸಿವಿಲ್ ನ್ಯಾಯಾಧೀಶರು, ಭಟ್ಕಳ.**